65

# <u>ಕರ್ನಾಟಕ ವಿಧಾನ ಪರಿಷತ್ತು</u>

## <u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ರವರ ಗಮನ ಸೆಳೆಯುವ ಸೂಚನೆ ನಿಯಮ 72ಕ್ಕೆ ಉತ್ತರ.</u>

**<u>ಸೂಚನೆ:-</u>**

ರಾಜ್ಯದಲ್ಲಿನ ಗಂಗಾಮತ ಮತ್ತು ಅದರ ಪರ್ಯಾಯ ಪದಗಳನ್ನು ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವರ ಮೂಲಕ ಕುಲಶಾಸ್ತ್ರೀಯ ಅಧ್ಯಯನ ಮಾಡಿಸಿ ರಾಜ್ಯ ಸರ್ಕಾರದ ಶಿಫಾರಸ್ಸಿನೊಂದಿಗೆ ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ನವದೆಹಲಿ ಇವರಿಗೆ ಸರ್ಕಾರ ಪ್ರಸ್ತಾವನೆ ಸಲ್ಲಿಸಿದ್ದಾಗ್ಯೂ ಗಂಗಾಮತ ಎಂಬ ಪದದ ಸೇರ್ಪಡೆ ಮತ್ತು ಇದರಲ್ಲಿ ಬರುವ ವಿವಿಧ ಪಂಗಡಗಳ ಬಗ್ಗೆ ORGI ನವರು ಪ್ರಸ್ತಾಪಿಸುತ್ತಾ ನಮ್ಮ ಪ್ರಸ್ತಾವನೆಯನ್ನು ಒಪ್ಪಿರುವುದಿಲ್ಲ. ಆದರೆ ಕೇವಲ ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ, ಮೊಗವೀರರನ್ನು ಮಾತ್ರ ಎಸ್.ಟಿ. ಗೆ ಸೇರಿಸುವುದಕ್ಕೆ ಸರ್ಕಾರ ಹೊಸದೊಂದು ಪ್ರಸ್ತಾವನೆಯನ್ನು ಕೇಂದ್ರಕ್ಕೆ ಪುನಃ ಸಲ್ಲಿಸಿ, ಈ ಸಮುದಾಯದ ನೆರವಿಗೆ ಬರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**<u>ಉತ್ತರ:-</u>**

ಗಂಗಾಮತ ಮತ್ತು ಅದರ ಉಪ ಜಾತಿಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸಲು ಸರ್ಕಾರದ ಆದೇಶ ಸಂಖ್ಯೆ: ಸಕಇ 169 ಎಸ್ಎಡಿ 2006, ದಿನಾಂಕ:08/04/2010 ರನ್ವಯ ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ ಹಂಪಿ, ಇವರು ಕುಲಶಾಸ್ತ್ರೀಯ ಅಧ್ಯಯನ ನಡೆಸಿ ಸಲ್ಲಿಸಿದ್ದ ಅಂತಿಮ ವರದಿಯನ್ನು ರಾಜ್ಯ ಸರ್ಕಾರವು ಪರಿಶೀಲಿಸಿ ಸರ್ಕಾರದ ಪತ್ರ ಸಂಖ್ಯೆ: ಸಕಇ 200 ಎಸ್ಎಡಿ 2011, ದಿನಾಂಕ:03.03.2014ರಲ್ಲಿ ಕೇಂದ್ರ ಸರ್ಕಾರಕ್ಕೆ ಗಂಗಾ ಮತ ಮತ್ತು ಅದರ ಈ ಕೆಳಕಂಡ ವಿವಿಧ ಪಂಗಡಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿತ್ತು.

> "**Bestha, Ambiga**/Ambi, Barki/Barika, Besthar, Bhoyi, Raja Bhoyi, Bunde-Besthar, Daalji, Daavat, Gabit, Galadakonkani, Gangemakkalu, Gangakula, Gangamatha, Gangamathastha, Gangaputra, Gowrimatha, Bunde-Bestha/Gunde-Bestha, Harakanthra, Jalagara, Kabbera/Kabber, **Kabbaliga**, Kabbili, Kahar, Kharvi/Konkan kharvi, **Koli,** Koli mahadev, Maddar, Meenagar, **Mogaveera,** Moger, Mukkavan, Parivara, Siviyar, Sunagara, Thoreya, Pagi".

ಮೇಲೆ ನಮೂದಿಸಿರುವ ಜಾತಿಗಳಲ್ಲಿ ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ, ಮೊಗವೀರರು ಸಹ ಒಳಗೊಂಡಿರುತ್ತಾರೆ. ಕೇಂದ್ರ ಬುಡಕಟ್ಟು ಮಂತ್ರಾಲಯ, ಭಾರತ ಸರ್ಕಾರ ಇವರ ದಿನಾಂಕ:30.11.2023ರ ಪತ್ರದಲ್ಲಿ ಗಂಗಾಮತ ಮತ್ತು ಅದರ ಉಪಜಾತಿಗಳನ್ನು ಕರ್ನಾಟಕ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಬಗ್ಗೆ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ರವರ ವರದಿಯಲ್ಲಿ ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ವರದಿಯನ್ನು ಸಲ್ಲಿಸುವಂತೆ ತಿಳಿಸಲಾಗಿದೆ. ಅದರಂತೆ, ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಇವರಿಗೆ ದಿನಾಂಕ:28.10.2024ರಂದು ಪತ್ರ ಬರೆದು ಮತ್ತೊಮ್ಮೆ ಸೂಕ್ತ ಸಮರ್ಥನೆ/ಸ್ಪಷ್ಟೀಕರಣ/ದಾಖಲೆಗಳೊಂದಿಗೆ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿದೆ. ಸದರಿ ನಿರ್ದೇಶನದನ್ವಯ ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವರಿಂದ ವರದಿಯನ್ನು ಪಡೆಯಲು ದಿನಾಂಕ:29.11.2024ರಂದು ಪತ್ರವನ್ನು ಬರೆಯಲಾಗಿದೆ.

ಪ್ರಸ್ತುತ ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ, ಮೊಗವೀರರು ಈ ಸಮುದಾಯಗಳನ್ನು ವಿವಿಧ ಪಂಗಡಗಳ ಪಟ್ಟಿಯೊಂದಿಗೆ, ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಲು ಈಗಾಗಲೇ ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿರುವುದರಿಂದ, ಈ ಹಂತದಲ್ಲಿ ಪ್ರಸ್ತಾಪಿತ ಸಮುದಾಯಗಳಿಗೆ ಪ್ರತ್ಯೇಕವಾಗಿ ಅಧ್ಯಯನ ಮಾಡಿಸಿ ಭಾರತ ಸರ್ಕಾರಕ್ಕೆ ಪ್ರತ್ಯೇಕ ಶಿಫಾರಸ್ಸು ಮಾಡುವುದು ಸೂಕ್ತವಾಗಿರುವುದಿಲ್ಲ.

ಆದಕಾರಣ, ಭಾರತ ಸರ್ಕಾರಕ್ಕೆ ಗಂಗಾಮತ ಮತ್ತು ಇತರೆ ಸಮುದಾಯಗಳನ್ನು ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಸೇರಿಸಲು ಶಿಫಾರಸ್ಸು ಮಾಡಿರುವುದರಿಂದ ಈ ಬಗ್ಗೆ ಅಂತಿಮ ತೀರ್ಮಾನವಾದ ನಂತರವೇ, ಮೇಲ್ಕಂಡ ಪ್ರಸ್ತಾಪಿತ ಸಮುದಾಯಗಳನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸುವ ಕುರಿತು ಪ್ರತ್ಯೇಕವಾಗಿ ಅಧ್ಯಯನ ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

**STW/SECB/SAD/23/2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ